ಶಿವಮೊಗ್ಗ ತಾಲ್ಲೂಕಿನ ಸಕ್ರೆಬೈಲು ಬಳಿ ತುಂಗಾ ನದಿ ಬಳಿ ಬೋಟಿಂಗ್ ವ್ಯವಸ್ಥೆ

1572 (1404) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ): ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿವಮೊಗ್ಗ ತಾ. ಸಕ್ರೆಬೈಲು ಬಳಿ ತುಂಗಾ ನದಿಯಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಬೋಟಿಂಗ್ ವ್ಯವಸ್ಥೆ ಕಲ್ಪಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ?

ಶ್ರೀ ವಸಂತ ವಿ. ಸಾಲಿಯಾನ (ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು):

ಅ) ಇರುವುದಿಲ್ಲ.

ಶಿವಮೊಗ್ಗ ತಾಲ್ಲೂಕಿನಲ್ಲಿ ಅಕ್ರಮ ಗಣಿಗಾರಿಕೆ

1570 (1402) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ): ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿವಮೊಗ್ಗ ತಾಲ್ಲೂಕಿನಲ್ಲಿ ಸೂಕ್ತ ಪರವಾನಗಿ ಪಡೆಯದೆ ಅಕ್ರಮ ಗಣಿಗಾರಿಕೆ ನಡೆಯುತ್ತಿದೆಯೇ; ಇಲ್ಲದಿದ್ದಲ್ಲಿ ಸರ್ಕಾರದ ಮತಿಯಿಂದ ಕಾನೂನು ರೀತ್ಯಾ ಲೀಜ್ ನೀಡಲಾಗಿರುವ ಕಲ್ಲುಬಂಡೆಗಳ ಸಂಖ್ಯೆ ಎಷ್ಟು; ಈ ಮೂಲಕ ಸರ್ಕಾರಕ್ಕೆ ಬರುತ್ತಿರುವ ಆದಾಯವೆಷ್ಟು; (ವಿವರ ನೀಡುವುದು)

ಆ) ಶಿವಮೊಗ್ಗ ತಾಲ್ಲೂಕಿನಲ್ಲಿ ಮರಳು ಹರಾಜಿನ ಮೂಲಕ ಸರ್ಕಾರಕ್ಕೆ ಕಳೆದ ಮೂರು ವರ್ಷಗಳಿಂದ ಬರುತ್ತಿರುವ ಆದಾಯವೆಷ್ಟು; (ವಿವರ ನೀಡುವುದು)?

ಶ್ರೀ ವಿ. ಮುನಿಯಪ್ಪ (ಗಣಿ ಮತ್ತು ಭೂವಿಜ್ಞಾನ ಸಚಿವರು):

ಅ) ಶಿವಮೊಗ್ಗ ತಾಲ್ಲೂಕಿನ ಮೂರು ಸ್ಥಳಗಳಲ್ಲಿ ಪರವಾನಗಿ ಇಲ್ಲದೆ ಅಕ್ರಮ ಕಲ್ಲು ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಅಕ್ರಮ ಗಣಿಗಾರಿಕೆ ನಿಲ್ಲಿಸಲಾಗಿದೆ. ಅಧಿಕೃತವಾಗಿ ಒಟ್ಟು 48 ಕಲ್ಲು ಗಣಿ ಗುತ್ತಿಗೆಗಳನ್ನು ಮಂಜೂರು ಮಾಡಿದೆ. ಇವುಗಳಿಂದ 2001-2002ನೇ ಸಾಲಿನಲ್ಲಿ ವಾರ್ಷಿಕ ರೂ. 8.85 ಲಕ್ಷ ಸರ್ಕಾರಕ್ಕೆ ಆದಾಯ ಬಂದಿರುತ್ತದೆ.

ಆ) ಶಿವಮೊಗ್ಗ ತಾಲ್ಲೂಕಿಗೆ ಗುತ್ತಿಗೆಗಳ ಅವಧಿ ಮುಗಿದ ನಂತರ ಮರಳು ಶೇಖರಣೆಯಾಗಿರುವ ಪ್ರಮಾಣವನ್ನು ಅನುಸರಿಸಿ ಪ್ರಸಕ್ತ ವರ್ಷದಲ್ಲಿ ಮೊದಲ ಬಾರಿಗೆ ಹರಾಜು ಮಾಡಲಾಗಿದ್ದು, ಇದರಿಂದ ಸರ್ಕಾರಕ್ಕೆ ರೂ. 4,100-00 ರಾಜಧನ ಬಂದಿರುತ್ತದೆ.

ಶಿವಮೊಗ್ಗ ತಾಲ್ಲೂಕು ನಿಧಿಗೆ ಗ್ರಾಮದಲ್ಲಿ ಕೆ.ಐ.ಡಿ.ಬಿ. ಮತಿಯಿಂದ ಕೈಗಾರಿಕಾ ಉದ್ದೇಶಕ್ಕಾಗಿ ಭೂಸ್ವಾಧೀನ

1571 (1403) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ): ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿವಮೊಗ್ಗ ತಾಲ್ಲೂಕಿನ ನಿಧಿಗೆ ಗ್ರಾಮದಲ್ಲಿ ಹೊಸದಾಗಿ ವಸಾಹತನ್ನು ಪ್ರಾರಂಭಿಸುವ ಯೋಜನೆಯ ಪ್ರಸ್ತಾಪ ಸರ್ಕಾರದ ಮುಂದಿದೆಯೆ; ಎಷ್ಟು ಎಕರೆ ಸರ್ಕಾರಿ ಹಾಗೂ ಖಾಸಗಿ ಜಮೀನನ್ನು ಈ ಉದ್ದೇಶಕ್ಕಾಗಿ ಭೂ ಸ್ವಾಧೀನಪಡಿಸಿಕೊಳ್ಳಲಾಗುವುದು ತಿಳಿಸುವಿರಾ; ಹಾಗೂ ಈ ಜಮೀನುಗಳ ಬಗರ್ ಹುಕುಂ ಸಾಗುವಳಿ ಮಾಡುತ್ತಿರುವ ಬಡ ರೈತರಿಗೆ ಪರಿಹಾರ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು):

ಅ) 295-37 ಎಕರೆ ಸರ್ಕಾರಿ ಹಾಗೂ 128-03 ಎಕರೆ ಖಾಸಗಿ ಜಮೀನನ್ನು ಕೈಗಾರಿಕಾ ಉದ್ದೇಶಕ್ಕಾಗಿ ಅಳವಡಿಸಲು ಉದ್ದೇಶಿಸಿದೆ. 128-03 ಎಕರೆ ಖಾಸಗಿ ಜಮೀನು ಸ್ವಾಧೀನಕ್ಕೊಳಪಡಿಸಿ, ಪರಿಹಾರಧನವನ್ನು ನೀಡಲಾಗಿದೆ.

ಬಗರ್ ಹುಕುಂ ಸಾಗುವಳಿಗಾರರಿಗೆ ಎಕರೆ ಒಂದಕ್ಕೆ ರೂ. 25,000-00 ಗಳಂತೆ ಎಕ್ಸ್‌ಗ್ರೇಷಿಯಾ ರೂಪದಲ್ಲಿ ಪರಿಹಾರ ನೀಡಲು ತೀರ್ಮಾನಿಸಲಾಗಿದೆ.

ಶಿವಮೊಗ್ಗದ ದೇವಿ ಶುಗರ್ ವರ್ಕ್ಸ್‌ನ ಪುನರಾಂಭದ ಬಗ್ಗೆ

1573 (1405) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ): ಮಾನ್ಯ ಪಶು ಸಂಗೋಪನೆ ಹಾಗೂ ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಶಿವಮೊಗ್ಗ ಸಮೀಪವಿರುವ ಶ್ರೀ ದೇವಿ ಸಕ್ಕರೆ ಕಾರ್ಖಾನೆ ಪುನರ್ ಆರಂಭದ ಬಗ್ಗೆ ಸರ್ಕಾರದ ಈವರೆಗೆ ಯಾವ ಕ್ರಮ ಕೈಗೊಂಡಿರುತ್ತದೆ?

ಶ್ರೀ ಎಂ. ಮಹದೇವ್ (ಪಶು ಸಂಗೋಪನೆ ಹಾಗೂ ಸಕ್ಕರೆ ಸಚಿವರು):

ಶಿವಮೊಗ್ಗದ ದೇವಿ ಸಕ್ಕರೆ ಕಾರ್ಖಾನೆಯಿಂದ ಬರಬೇಕಾದ ಬಾಕಿಗಾಗಿ ಚೆನ್ನೈ ಹೈಕೋರ್ಟ್‌ನಲ್ಲಿ ದಾವಾ ಹೂಡಿದ್ದರಿಂದ ಚೆನ್ನೈ ಹೈ-ಕೋರ್ಟ್ ಸದರಿ ಕಾರ್ಖಾನೆಯನ್ನು ಸಮಾಪನೆಗೊಳಿಸಲು ಹಾಗೂ ಸಮಸ್ತ ವಹಿವಾಟನ್ನು ಚೆನ್ನೈ ಹೈ ಕೋರ್ಟ್‌ನಿಂದ ನೇಮಕವಾದ ಅಫಿಷಿಯಲ್ ಲಿಕ್ವಿಡೇಟರ್ ರವರ ವಶಕ್ಕೆ ನೀಡುವ ಆದೇಸ ಹೊರಡಿಸಿದ್ದರ ಮೇರೆಗೆ ಕಾರ್ಖಾನೆಯನ್ನು ಅಫಿಷಿಯಲ್ ಲಿಕ್ವಿಡೇಟರ್ ಅವರು ತಮ್ಮ ವಶಕ್ಕೆ ಪಡೆದುಕೊಂಡಿದ್ದಾರೆ.

ಮೆ: ದೇವಿ ಶುಗರ್ಸ್ ಕಾರ್ಖಾನೆಯು ಖಾಸಗಿ ಕ್ಷೇತ್ರದ ಕಾರ್ಖಾನೆಯಾಗಿದ್ದು, ಸದರಿ ಕಾರ್ಖಾನೆಯನ್ನು ಸರ್ಕಾರ ತನ್ನ ವಶಕ್ಕೆ ತೆಗೆದುಕೊಳ್ಳಬೇಕೆಂದು ಈ ಹಿಂದೆ ಯೋಚಿಸಿದ ಪ್ರಸ್ತಾವೆಯನ್ನು ಮೇಲಿನ ಕಾರಣಕ್ಕಾಗಿ ಕೈ ಬಿಡಲಾಗಿದೆ. ಕಾರಣ ಪುನಃ ಕಾರ್ಖಾನೆ ಪ್ರಾರಂಭಿಸುವ ಪ್ರಶ್ನೆ ಇರುವುದಿಲ್ಲ.

ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ಲೆಕ್ಕಪತ್ರದ ಬಗ್ಗೆ

1574 (2047) ಶ್ರೀ ಚನ್ನಿಗಪ್ಪ ಸಿ. (ಕೊರಟಗೆರೆ): ಮಾನ್ಯ ಸಣ್ಣ ಕೈಗಾರಿಕೆ ಮತ್ತು ಹಜ್ ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸರ್ಕಾರಿ ಸಂಸ್ಥೆಯಾದ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿನ ಲೆಕ್ಕಪತ್ರಗಳನ್ನು ಮಹಾಲೇಖಪಾಲರಿಂದ ಅಥವಾ ರಾಜ್ಯ ಲೆಕ್ಕಪತ್ರ ಇಲಾಖೆಯಿಂದ ತನಿಖೆ ಮಾಡಿಸಲಾಗಿದೆಯೇ?

ಆ) ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ ಆಂತರಿಕ ಲೆಕ್ಕ ಪರಿಶೋಧನಾ ವಿಭಾಗ ಇದೆಯೆ;

ಇ) ಇಲ್ಲಿಯವರೆವಿಗೂ ಲೆಕ್ಕಪತ್ರ ಆಡಿಟ್ ಮಾಡಿಸದೇ ಇರುವುದು ಸರ್ಕಾರಕ್ಕೆ ತಿಳಿದಿದೆಯೇ;

ಈ) ತಿಳಿದಿದ್ದರೆ, ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಆರ್. ರೋಷನ್‌ಬೇಗ್ (ಕೈಗಾರಿಕೆ ಮತ್ತು ಹಜ್ ಸಚಿವರು):

ಅ) ಇಲ್ಲ.